ಅಸಲು ದಾವಾ ಸಂಖ್ಯೆ 119/2020
ಪಿ.ಡಬ್ಲ್ಯು:2

**ದಿನಾಂಕ 05.07.2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಭೋದನೆ ಮಾಡಿ ಪ್ರಮಾಣೀಕರಿಸಲಾಯಿತು.**

**ಪಾಟೀ ಸವಾಲು : ಶ್ರೀ ಜೆ.ಎನ್.ಎನ್. ಪ್ರತಿವಾದಿ ಪರ ವಕೀಲರಿಂದ**

ನಾನು ಅನಕ್ಷರಸ್ಥ. ನನ್ನ ಮುಖ್ಯ ವಿಚಾರಣ ಪ್ರಮಾಣಪತ್ರದಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಹೌಸ್‌ಲಿಸ್ಟ್ ನಂ.71 ಆಗಿದ್ದು, ಅದರ ವಿಸ್ತೀರ್ಣ 40 X 50 ಅಡಿಗಳು. ಅದರ ಚಕ್ಕುಬಂದಿ ಪೂರ್ವಕ್ಕೆ – ಹಳ್ಳ, ಪಶ್ಚಿಮಕ್ಕೆ – ಅಶ್ವಥಮ್ಮನ ಮನೆ, ಉತ್ತರಕ್ಕೆ ರಸ್ತೆ ಮತ್ತು ದಕ್ಷಿಣಕ್ಕೆ – ಲಕ್ಷ್ಮಮ್ಮರವರ ಸ್ವತ್ತು ಇದೆ. ದಾವಾ ಸ್ವತ್ತಿನಿಂದ ಉತ್ತರಕ್ಕೆ ನಮ್ಮ ಮನೆ 50 ಅಡಿಗಳ ಅಂತರದಲ್ಲಿದೆ. ನಮ್ಮ ಮನೆಯ ಹೌಸ್‌ಲಿಸ್ಟ್ ನಂಬರ್ ಗೊತಿಲ್ಲ.

ವಾದಿ ಮತ್ತು 1 ನೇ ಪ್ರತಿವಾದಿ ಅಣ್ಣ ತಮ್ಮಂದಿರು ಎಂದರೆ ಸರಿ. ವಾದಿಯು ದಾವಾ ಸ್ವತ್ತಿನಲ್ಲಿ ಸ್ವಾಧೀನದಲ್ಲಿಲ್ಲ ಬದಲಾಗಿ 1 ನೇ ಪ್ರತಿವಾದಿಯು ಸ್ವಾಧೀನಾದಲ್ಲಿದ್ದಾರೆ ಎಂದರೆ ಸರಿಯಲ್ಲ. ನನಗೆ ದಾವಾ ಸ್ವತ್ತಿನ ಬಗ್ಗೆ ಗೊತ್ತಿಲ್ಲದಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ದಾವಾ ಸ್ವತ್ತಿಗೆ ಹಕ್ಕುದಾರರು ಎಂದರೆ ಸರಿಯಲ್ಲ. ವಾದಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇದೆ

ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಬಾಗೇಪಲ್ಲಿ.